## 2024 ರ ಕರ್ನಾಟಕ ಅಧಿನಿಯಮ ಸಂಖ್ಯೆ: 07

## ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ)ಅಧಿನಿಯಮ, 2024

### ಪ್ರಕರಣಗಳ ಪಟ್ಟಿ

**ಪ್ರಕರಣಗಳು**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 7ನೇ ಪ್ರಕರಣದ ತಿದ್ದುಪಡಿ
3. 17ನೇ ಪ್ರಕರಣದ ತಿದ್ದುಪಡಿ


### ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**2024ರ ತಿದ್ದುಪಡಿ ಅಧಿನಿಯಮ ಸಂಖ್ಯೆ:07** ರಾಜ್ಯ ಮಟ್ಟದ ಸಮಿತಿಗೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಇವರನ್ನು ಸದಸ್ಯರನ್ನಾಗಿ ಮತ್ತು ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರನ್ನು ಸಂಚಾಲಕರನ್ನಾಗಿ ನೇಮಿಸಲು ಹಾಗೂ ವಾಣಿಜ್ಯ ಕೈಗಾರಿಕೆ ಮತ್ತು ವ್ಯವಹಾರ ಉದ್ಯಮಗಳು, ಟ್ರಸ್ಟ್‌ಗಳು, ಸಮಾಲೋಚನಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು ಮನೋರಂಜನಾ ಕೇಂದ್ರಗಳು ಮತ್ತು ಹೋಟೆಲ್‌ಗಳು ಮುಂತಾದವುಗಳು ತಮ್ಮ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು 60% ರಷ್ಟು ಪ್ರದರ್ಶಿಸಲಾಗಿರುವುದನ್ನು ಮತ್ತು ಕನ್ನಡ ಭಾಷೆಯು ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿತವಾಗಿರುವುದನ್ನು ಖಚಿತಪಡಿಸಿಕೊಳ್ಳುವುದಕ್ಕಾಗಿ ಉಪಬಂಧ ಕಲ್ಪಿಸಲು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022 (2023ರ ಕರ್ನಾಟಕ ಅಧಿನಿಯಮ 13)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.


[2024ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 1, ಕಡತ ಸಂಖ್ಯೆ:ಸಂವ್ಯಶಾಇ 01 ಶಾಸನ 2024]

[ಭಾರತ ಸಂವಿಧಾನದ ಅನುಚ್ಛೇದ 345 ರಡಿ ಬರುತ್ತದೆ.]

[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:113, ದಿನಾಂಕ:26.02.2024 ರಲ್ಲಿ ಪ್ರಕಟಗೊಂಡಿದೆ]

## 2024 ರ ಕರ್ನಾಟಕ ಅಧಿನಿಯಮ ಸಂಖ್ಯೆ: 07

(2024 ರ ಫೆಬ್ರುವರಿ ತಿಂಗಳ 26ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ)ಅಧಿನಿಯಮ, 2024

(2024 ರ ಫೆಬ್ರುವರಿ ತಿಂಗಳ 25ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022ನ್ನು (2023ರ ಕರ್ನಾಟಕ ಅಧಿನಿಯಮ ಸಂಖ್ಯೆ 13)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಅಧಿನಿಯಮ, 2024 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆಬರತಕ್ಕದ್ದು.

**2. 7ನೇ ಪ್ರಕರಣದ ತಿದ್ದುಪಡಿ.-** ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022ನ್ನು (2023ರ ಕರ್ನಾಟಕ ಅಧಿನಿಯಮ ಸಂಖ್ಯೆ 13)ರ (ಇದರಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 7ನೇ ಪ್ರಕರಣದ, (2)ನೇ ಉಪಪ್ರಕರಣದಲ್ಲಿರುವ (ಎ) ಖಂಡದ (vii)ನೇ ಬಾಬುವಿಗೆ ಬದಲಾಗಿ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(vii) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ – ಸದಸ್ಯ

(vii-ಎ) ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಇವರು ಸಮಿತಿಯ ಸಂಚಾಲಕರಾಗಿರತಕ್ಕದ್ದು."

**3. 17ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 17ನೇ ಪ್ರಕರಣದಲ್ಲಿನ (6)ನೇ ಉಪಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(6) ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರಗಳಿಂದ ಅನುಮತಿ ಮತ್ತು ಮಂಜೂರಾತಿಯೊಂದಿಗೆ ಕಾರ್ಯನಿರ್ವಹಿಸುತ್ತಿರುವ ವಾಣಿಜ್ಯ, ಕೈಗಾರಿಕೆ ಮತ್ತು ವ್ಯವಹಾರ ಉದ್ಯಮಗಳು, ಟ್ರಸ್ಟ್‌ಗಳು, ಸಮಾಲೋಚನಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು,

ಮನೋರಂಜನಾ ಕೇಂದ್ರಗಳು ಮತ್ತು ಹೋಟೆಲ್‌ಗಳು ಮುಂತಾದವುಗಳು ತಮ್ಮ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು 60% ರಷ್ಟು ಪ್ರದರ್ಶಿಸಲಾಗಿದೆ ಮತ್ತು ಕನ್ನಡ ಭಾಷೆಯು ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿತವಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.